**ದಿನಾಂಕ: 21.02.2019 ರಂದು ಬೆಳಗ್ಗೆ 11.00 ಗಂಟೆಗೆ ವಿಧಾನ ಸೌಧ, 3ನೇ ಮಹಡಿ, ಕೊಠಡಿ ಸಂಖ್ಯೆ: 334 ರಲ್ಲಿ ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗಳಾದ ಶ್ರೀ. ಟಿ.ಎಂ. ವಿಜಯ ಭಾಸ್ಕರ್ ರವರ ಅಧ್ಯಕ್ಷತೆಯಲ್ಲಿ ನಡೆದ ಪ್ರಧಾನ ಮಂತ್ರಿಗಳ ಹೊಸ 15 ಅಂಶಗಳ ಕಾರ್ಯಕ್ರಮದ 16ನೇ ರಾಜ್ಯ ಮಟ್ಟದ ಪ್ರಗತಿ ಪರಿಶೀಲನ ಸಭೆಯ ನಡವಳಿ.**

ಸಭೆಯ ಹಾಜರಾತಿ ಪಟ್ಟಿ ಲಗತ್ತಿಸಿದೆ.

ಸಭೆ ಪ್ರಾರಂಭವಾಗುತ್ತಿದ್ದಂತೆ ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ಕಾರ್ಯದರ್ಶಿಗಳಾದ ಶ್ರೀಮತಿ.ಎಂ.ವಿ. ಸಾವಿತ್ರಿ, ಭಾ.ಆ.ಸೇ., ಇವರು ಮುಖ್ಯ ಕಾರ್ಯದರ್ಶಿಗಳಾದ ಶ್ರೀ. ಟಿ.ಎಂ. ವಿಜಯ ಭಾಸ್ಕರ್, ಇವರನ್ನು ಮತ್ತು ಸಭೆಯಲ್ಲಿ ಭಾಗವಹಿಸಿದ್ದ ಎಲ್ಲಾ ಅಧಿಕಾರಿ ವೃಂದದ ಮತ್ತು ಅಧಿಕಾರೇತರ ಸದಸ್ಯರಿಗೆ ಸ್ವಾಗತವನ್ನು ಕೋರಿದರು. ನಂತರ ಸಭೆಯನ್ನು ಪ್ರಾರಂಭಿಸಲಾಯಿತು.

ಮೊದಲಿಗೆ ದಿನಾಂಕ: 28.08.2018ರ ಸಭೆಯಲ್ಲಿ ಕೈಗೊಂಡ ನಿರ್ಣಯಗಳ ಬಗ್ಗೆ ತೆಗೆದುಕೊಂಡಿರುವ ಕ್ರಮಗಳನ್ನು ಮುಖ್ಯ ಕಾರ್ಯದರ್ಶಿ ರವರು ಪರಿಶೀಲಿಸಿದರು.

1. ಉರ್ದು ಶಾಲೆಗಳನ್ನು ಉನ್ನತೀಕರಣಗೊಳಿಸುವುದರ ಬಗ್ಗೆ ಪ್ರಸ್ತಾಪಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ ರವರು, 2018-19ನೇ ಸಾಲಿನಲ್ಲಿ ಒಟ್ಟು 24 ಶಾಲೆಗಳಿಗೆ ಅನುಮೋದನೆ ದೊರತಿದ್ದು, ಇದರಲ್ಲಿ 4 ಉರ್ದು ಶಾಲೆಗಳು ರಾಯಚೂರು ಜಿಲ್ಲೆಯಲ್ಲಿದ್ದು, ಉನ್ನತೀಕರಣಗೊಳಿಸಲು ಅನುಮತಿ ದೊರಕುವುದರಲ್ಲಿ ವಿಳಂಬವಾಗಿರುತ್ತದೆ. ಮುಂದಿನ ವರ್ಷದಲ್ಲಿ ಈ 4 ಉರ್ದು ಶಾಲೆಗಳನ್ನು ಉನ್ನತೀಕರಣಗೊಳಿಸಲು ಕ್ರಮ ಕೈಗೊಳ್ಳಲಾಗುವುದೆಂದು ತಿಳಿಸಿದರು.
   **(ಕ್ರಮ: ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ/ ಶಿಕ್ಷಣ ಇಲಾಖೆ)**

2. ಅಲ್ಪಸಂಖ್ಯಾತರು ಹೆಚ್ಚಾಗಿ ವಾಸಿಸುತ್ತಿರುವ ಸ್ಥಳಗಳಲ್ಲಿ ಒಟ್ಟು 5182 ಅಂಗನವಾಡಿಗಳಿದ್ದು, 2886 ಅಂಗನವಾಡಿಗಳಿಗೆ ಸ್ವಂತ ಕಟ್ಟಡಗಳಿಲ್ಲವೆಂದು ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ರವರು ತಿಳಿಸಿದರು. ಇದನ್ನು ಗಮನಿಸಿದ ಮುಖ್ಯ ಕಾರ್ಯದರ್ಶಿಗಳು, ಈ ಪೈಕಿ 294 ಅಂಗನವಾಡಿಗಳಿಗೆ ಸ್ವಂತ ನಿವೇಶನ ಲಭ್ಯವಿದ್ದು, ಈ ಕೂಡಲೇ ಕಟ್ಟಡಗಳನ್ನು ನಿರ್ಮಾಣ ಮಾಡಲು ಕ್ರಮವಹಿಸುವಂತೆ ಸೂಚಿಸಿದರು.

   ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯ ಪ್ರಗತಿಯ ಬಗ್ಗೆ ಪರಿಶೀಲಿಸಿದ ಮುಖ್ಯ ಕಾರ್ಯದರ್ಶಿ ರವರು ಅಲ್ಪಸಂಖ್ಯಾತರು ಹೆಚ್ಚಾಗಿ ವಾಸಿಸುತ್ತಿರುವ ಸ್ಥಳಗಳಲ್ಲಿ ಉರ್ದು ಮತ್ತು ಕನ್ನಡ ಬಲ್ಲ ಕಾರ್ಯಕರ್ತರನ್ನು ನೇಮಿಸಲು ತಿಳಿಸಿದರು. ಇದಕ್ಕೆ ಪ್ರತಿ ಸ್ಪಂದಿಸಿದ ಶ್ರೀ. ಸೈಯದ್ ನಾಸಿರ್ ಹುಸೈನ್, ಮಾನ್ಯ ಸದಸ್ಯರು, ಬಾಲ ಕಾರ್ಮಿಕರಲ್ಲಿ ಹೆಚ್ಚಾಗಿ ಮುಸ್ಲಿಂ ಸಮುದಾಯದವರೆ ಆಗಿದ್ದು, ಈ ಸಮಸ್ಯೆಯನ್ನು ಬಗೆಹರಿಸಲು ಅಲ್ಪಸಂಖ್ಯಾತರು ವಾಸಿಸುತ್ತಿರುವ ಪ್ರದೇಶಗಳಲ್ಲಿ ಹೆಚ್ಚು ಅಂಗನವಾಡಿ ಕೇಂದ್ರಗಳನ್ನು ಸ್ಥಾಪಿಸುವ ಅವಶ್ಯಕತೆಯಿದೆ ಎಂದು ಅಭಿಪ್ರಾಯಪಟ್ಟರು. ಅಂತೆಯೇ ಮುಖ್ಯ ಕಾರ್ಯದರ್ಶಿ ರವರು ಈ ಕುರಿತು ಕ್ರಮ ವಹಿಸುವಂತೆ ಜಂಟಿ ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ ರವರಿಗೆ ಸೂಚಿಸಿದರು.

   (ಕ್ರಮ: ನಿರ್ದೇಶಕರು, ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆ)

3. ಉರ್ದು ಶಾಲೆಗಳಲ್ಲಿ ಶಿಕ್ಷಕರ ಕೊರತೆ ಇದ್ದು, ಉರ್ದು ಶಿಕ್ಷಕರ ನೇಮಕಾತಿಯಲ್ಲಿ ಸಾಕಷ್ಟು ಪ್ರಗತಿಯಾಗದೆ ಇರುವುದನ್ನು ಮುಖ್ಯ ಕಾರ್ಯದರ್ಶಿ ರವರು ಗಮನಿಸಿದರು. ಇದಕ್ಕೆ ಪ್ರತಿಕ್ರಯಿಸಿದ ನಿರ್ದೇಶಕರು, ಉರ್ದು ಮತ್ತು ಇತರೆ ಅಲ್ಪಸಂಖ್ಯಾತ ಭಾಷಾ ಶಾಲೆಗಳ ನಿರ್ದೇಶನಾಲಯ ರವರು ಪ್ರಸ್ತುತ 10,000 ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಗಳು ಖಾಲಿ ಇದ್ದು, ಅದರಲ್ಲಿ 494 ಉರ್ದು ಶಿಕ್ಷಕರು ಟಿ.ಇ.ಟಿ ಪರೀಕ್ಷೆಯನ್ನು ತೆಗೆದುಕೊಂಡು, ಕೇವಲ 55 ಶಿಕ್ಷಕರು ಮಾತ್ರ ಉತ್ತೀರ್ಣರಾಗಿದ್ದು, ಈ ಎಲ್ಲಾ ಶಿಕ್ಷಕರಿಗೂ ನೇಮಕಾತಿ ಆದೇಶವನ್ನು ಹೊರಡಿಸಲಾಗಿದೆ ಎಂದು ತಿಳಿಸಿದರು. ಅಂತೆಯೇ ಉಳಿದ ಖಾಲಿ ಹುದ್ದೆಗಳು ತುಂಬಲು ನೇಮಕಾತಿ ಪ್ರಕ್ರಿಯೆಯನ್ನು ಮುಖ್ಯ ಕಾರ್ಯದರ್ಶಿ ರವರು ಚುರುಕುಗೊಳಿಸಲು ತಿಳಿಸಿದರು.
**(ಕ್ರಮ: ನಿರ್ದೇಶಕರು, ಉರ್ದು ಮತ್ತು ಮತೀಯ ಅಲ್ಪಸಂಖ್ಯಾತರ ಭಾಷಾ ಶಾಲೆಗಳ ನಿರ್ದೇಶನಾಲಯ)**

4. ಎಲ್ಲಾ ಇಲಾಖೆಗಳಲ್ಲಿನ ಫಲಾನುಭವಿ ಆಧಾರಿತ ಯೋಜನೆಗಳಲ್ಲಿ ಶೇ. 15 ರಷ್ಟು ಅಲ್ಪಸಂಖ್ಯಾತರಿಗೆ ತಲುಪಿದೆಯೇ ಎಂಬುದರ ಬಗ್ಗೆ ಪ್ರತಿ ಮಾಹೆ ನಡೆಸುವ ಕರ್ನಾಟಕ ಅಭಿವೃದ್ಧಿ ಕಾರ್ಯಕ್ರಮದ ಸಭೆಯಲ್ಲಿ ಪ್ರಸ್ತಾಪಿಸುವುದರಿಂದ, DSS (Decision Support System) ನಲ್ಲಿ ಮಾಹಿತಿ ಒದಗಿಸದೇ ಇರುವಂತಹ ಇಲಾಖೆಗಳಿಂದ ತುಂಬಲು ಸೂಕ್ತ ಕ್ರಮ ವಹಿಸಲು ಮುಖ್ಯ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯವರಿಗೆ ಸೂಚಿಸಿದರು.
**(ಕ್ರಮ: ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ)**

5. ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಜಿಲ್ಲಾ ಮಟ್ಟದ ಪ್ರಧಾನ ಮಂತ್ರಿಗಳ ಹೊಸ 15 ಅಂಶಗಳ ಕಾರ್ಯಕ್ರಮದ ಪ್ರಗತಿ ಪರಿಶೀಲನೆ ಸಭೆಯ ಬಗ್ಗೆ ವಿಚಾರಿಸಿದ ಮುಖ್ಯ ಕಾರ್ಯದರ್ಶಿ ರವರು, ಸಭೆಯನ್ನು ನಡೆಸದೇ ಇರುವಂತಹ ಜಿಲ್ಲಾಧಿಕಾರಿಗಳಿಗೆ ಸಭೆ ನಡೆಸುವಂತೆ ಸೂಚನೆ ನೀಡಲು ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ರವರಿಗೆ ತಿಳಿಸಿದರು.
**(ಕ್ರಮ: ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ.)**

6. ಅಧ್ಯಕ್ಷರು, ಮೆ॥ ಫೆಡರೇಷನ್ ಆಫ್ ಮಸ್ಜಿದ್, ಮದ್ರಸಾ ಮತ್ತು ವಕ್ಫ್ ಇನ್ಸಿಟ್ಯೂಷನ್ಸ್, ರವರು ಅಧಿಕಾರೇತರ ಸದಸ್ಯರಿಗೆ ಯೋಜನೆಗಳ ಬಗ್ಗೆ ಪರಿಶೀಲಿಸಲು ಜಿಲ್ಲೆಗಳನ್ನು ಹಂಚಿಕೆಯಾಗದೇ ಇರುವ ಬಗ್ಗೆ ಪ್ರಸ್ತಾಪಿಸಿದಾಗ, ಪ್ರತಿಕ್ರಯಿಸಿದ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗ ರವರು ಈಗಾಗಲೇ ಆಯೋಗದಿಂದ ಜಿಲ್ಲೆಗಳಿಗೆ ಪ್ರಧಾನ ಮಂತ್ರಿಗಳ ಹೊಸ 15 ಅಂಶ ಕಾರ್ಯಕ್ರಮದ ಅನುಷ್ಠಾನದ ಬಗ್ಗೆ ಪರಿಶೀಲಿಸಲು ಭೇಟಿ ನೀಡಲಾಗುತ್ತಿದ್ದು, ಭೇಟಿನೀಡುವ ಸಮಯದಲ್ಲಿ ಸದಸ್ಯರುಗಳಿಗೂ ಸಹ ಭಾಗವಹಿಸಲು ಸೂಚಿಸಲಾಗುವುದೆಂದು ಅಭಿಪ್ರಾಯಪಟ್ಟರು. ಇದಕ್ಕೆ ಸಮಿತಿಯು ಒಪ್ಪಿತು.
**(ಕ್ರಮ: ಕಾರ್ಯದರ್ಶಿ, ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗ)**

7. ಶಿಕ್ಷಣ ಇಲಾಖೆಯ ಪ್ರಗತಿಯನ್ನು ಪರಿಶೀಲಿಸಿದ ಮುಖ್ಯ ಕಾರ್ಯದರ್ಶಿ ರವರು ಕಸ್ತೂರಿ ಬಾ ಗಾಂಧಿ ಬಾಲಿಕಾ ವಿದ್ಯಾಲಯಗಳಲ್ಲಿ ಮತ್ತು ಬಾಲಕಿಯರ ವಿದ್ಯಾರ್ಥಿ ನಿಲಯ ದಾಖಲಾತಿಯಲ್ಲಿ ಸಾಕಷ್ಟು ಪ್ರಮಾಣದ ಪ್ರಗತಿಯಾಗದೇ ಇರುವುದನ್ನು ಗಮನಿಸಿ, ವ್ಯಾಪಕ ಪ್ರಚಾರವನ್ನು ಗ್ರಾಮೀಣ

ಪ್ರದೇಶದಲ್ಲಿ ನೀಡುವುದರ ಮೂಲಕ ಹಾಗೂ ಅಲ್ಪಸಂಖ್ಯಾತರ ನಿರ್ದೇಶನಾಲಯದ ಸಹಯೋಗದೊಂದಿಗೆ ದಾಖಲಾತಿಗಳನ್ನು ಪ್ರಬಲಗೊಳಿಸುವಂತೆ ತಿಳಿಸಿದರು.

**(ಕ್ರಮ: ನಿರ್ದೇಶಕರು, ಸರ್ವ ಶಿಕ್ಷಣ ಅಭಿಯಾನ /ಶಿಕ್ಷಣ ಇಲಾಖೆ)**

8. ಮದರಸಗಳ ಆಧುನಿಕರಣ ಮತ್ತು ಅಲ್ಪಸಂಖ್ಯಾತ ವಿದ್ಯಾರ್ಥಿ ವೇತನದ ಬಗ್ಗೆ ಚರ್ಚಿಸಿದ ಮುಖ್ಯ ಕಾರ್ಯದರ್ಶಿ ರವರು ಬಾಕಿ ಉಳಿದಿರುವ ಪ್ರಸ್ತಾವನೆಗಳನ್ನು 28 ಫೆಬ್ರವರಿ 2019ರ ಒಳಗಾಗಿ ವಿಲೇವಾರಿಗೊಳಿಸುವಂತೆ ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ ರವರಿಗೆ ಸೂಚಿಸಿದರು.

   **(ಕ್ರಮ: ನಿರ್ದೇಶಕರು, ಅಲ್ಪಸಂಖ್ಯಾತರ ನಿರ್ದೇಶನಾಲಯ)**

9. ಅಧಿಕಾರೇತರ ಸದಸ್ಯರುಗಳು, ಅಲ್ಪಸಂಖ್ಯಾತ ಮುಸ್ಲಿಂ ಸಮುದಾಯದವರಿಗೆ ರಾಜ್ಯ ಸರ್ಕಾರದ ಪ್ರವರ್ಗ-1 ಮತ್ತು ಪ್ರವರ್ಗ -2ಎ ಮತ್ತು ಕೇಂದ್ರ ಸರ್ಕಾರದ ಒ.ಬಿ.ಸಿ ಪ್ರಮಾಣ ಪತ್ರವನ್ನು ನೀಡಲು ನಿರಾಕರಿಸುತ್ತಿರುವ ತಹಸಿಲ್ದಾರುಗಳಿಗೆ ಸೂಚನೆ ನೀಡುವಂತೆ ಹಾಗೂ ಇದರಿಂದಾಗಿ ಸರ್ಕಾರಿ ಸವಲತ್ತುಗಳನ್ನಲ್ಲದೆ, ಶಿಕ್ಷಣ ಮತ್ತು ವೃತ್ತಿಯ ಅವಕಾಶಗಳಿಂದ ಅಲ್ಪಸಂಖ್ಯಾತ ಮುಸ್ಲಿಂ ಸಮುದಾಯವರು ವಂಚಿತರಾಗುತ್ತಿರುವುದಾಗಿ ತಿಳಿಸಿದರು. ಈ ಕುರಿತು ಪ್ರವರ್ಗ-1 ಮತ್ತು ಪ್ರವರ್ಗ -2ಎ ಹಾಗೂ ಕೇಂದ್ರ ಸರ್ಕಾರದ ಒಬಿಸಿ (OBC) ಪ್ರಮಾಣ ಪತ್ರವನ್ನು ನೀಡುವಂತೆ ಸೂಕ್ತ ಸುತ್ತೋಲೆಯನ್ನು ಹೊರಡಿಸಲು ಕಡತವನ್ನು ಸಿಆಸು ಇಲಾಖೆಗೆ ಸಲ್ಲಿಸುವಂತೆ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ರವರಿಗೆ ತಿಳಿಸಿದರು.

   **(ಕ್ರಮ: ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ/ ಕಾರ್ಯದರ್ಶಿ,ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗ.)**

10. ಒಳಾಡಳಿತ ಇಲಾಖೆಯ ಪ್ರಗತಿ ಪರಿಶೀಲನೆ ನಡೆಸಲಾಗಿ, ಕೋಮುಗಲಭೆಯನ್ನು ತಡೆಗಟ್ಟಲು ಶಾಂತಿ ಸಭೆಯನ್ನು ಕೇವಲ ಕೆಲವು ಜಿಲ್ಲೆಗಳಲ್ಲಿ ಮಾತ್ರ ಹಮ್ಮಿಕೊಳ್ಳಲಾಗಿದ್ದು, ಎಲ್ಲಾ ಜಿಲ್ಲೆಗಳಲ್ಲಿ ನಿಯಮಿತವಾಗಿ ಹಮ್ಮಿಕೊಳ್ಳುವಂತೆ ಜಿಲ್ಲಾಧಿಕಾರಿಗಳು/ಜಿಲ್ಲಾ ಪೋಲೀಸ್ ಅಧೀಕ್ಷಕರುಗಳಿಗೆ ಒಳಾಡಳಿತ ಇಲಾಖೆಯಿಂದ ಸೂಚಿಸುವಂತೆ ಮತ್ತು ಕೋಮುಗಲಬೆ ಪ್ರಕರಣಗಳ ಇತ್ಯರ್ಥಕ್ಕಾಗಿ ವಿಶೇಶ ನ್ಯಾಯಾಲಯಗಳನ್ನು ಸ್ಥಾಪಿಸಲು ಕ್ರಮ ವಹಿಸುವಂತೆ ಹಾಗೆಯೇ ಪ್ರತಿ ತಿಂಗಳು ಶಾಂತಿ ಸಮಿತಿ ಸಭೆ (Peace Committee Meeting) ನ್ನು ಮಾಡುವುದಕ್ಕೆ ಎಲ್ಲಾ ಜಿಲ್ಲಾಧಿಕಾರಿಗಳು/ಜಿಲ್ಲಾ ಪೋಲೀಸ್ ಅಧೀಕ್ಷಕರು ರವರಿಗೆ ಸೂಚನೆ ನೀಡುವಂತೆ ಮುಖ್ಯ ಕಾರ್ಯದರ್ಶಿಗಳು ಅಪರ ಮುಖ್ಯ ಕಾರ್ಯದರ್ಶಿಗಳು, ಗೃಹ ಇಲಾಖೆ ರವರಿಗೆ ಸೂಚಿಸಿದರು

    **(ಕ್ರಮ: ಅಪರ ಮುಖ್ಯ ಕಾರ್ಯದರ್ಶಿಗಳು, ಒಳಾಡಳಿತ ಇಲಾಖೆ)**

11. ಸಾಮಾಜಿಕ ಮಾಧ್ಯಮಗಳಲ್ಲಿ, (Social Media) ಕೋಮು ಗಲಭೆಗಳನ್ನು ಉತ್ತೇಜಿಸುವ ಕಾರ್ಯಗಳು ಹೆಚ್ಚಾಗುತ್ತಿದೆ, ಇದನ್ನು ತಡೆಗಟ್ಟಲು ಕ್ರಮ ವಹಿಸುವಂತೆ ಶ್ರೀ. ಸೈಯದ್ ನಾಸೀರ್ ಹುಸೇನ್, ಸದಸ್ಯರು ರವರು ಪ್ರಸ್ತಾಪಿಸಿದರು. ಇದಕ್ಕೆ ಸ್ಪಂದಿಸಿದ ಅಪರ ಮುಖ್ಯ ಕಾರ್ಯದರ್ಶಿ, ಗೃಹ ಇಲಾಖೆ ಅಂತಹ ಸಾಮಾಜಿಕ ಮಾಧ್ಯಮಗಳ ಗುಂಪು (Social Media Group) ಗಳನ್ನು ನಿರ್ಬಂಧಿಸುವ ಅಧಿಕಾರ ಕೇಂದ್ರ ಗೃಹ ಇಲಾಖೆಗೆ ಮಾತ್ರ ಇರುತ್ತದೆ ಎಂದು ತಿಳಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಮುಖ್ಯ ಕಾರ್ಯದರ್ಶಿ ರವರು ರಾಜ್ಯ ಸರ್ಕಾರಕ್ಕೂ ಸಹ ಅಂತಹ ಗುಂಪುಗಳನ್ನು

ನಿರ್ಬಂಧಿಸಲು ಅನುಮತಿಯನ್ನು ನೀಡುವಂತೆ ಕೋರಲು ಕೇಂದ್ರ ಸರ್ಕಾರಕ್ಕೆ ಪತ್ರ ಬರೆಯುವಂತೆ ಅಪರ ಮುಖ್ಯ ಕಾರ್ಯದರ್ಶಿ, ಗೃಹ ಇಲಾಖೆ ರವರಿಗೆ ತಿಳಿಸಿದರು.

**(ಕ್ರಮ: ಅಪರ ಮುಖ್ಯ ಕಾರ್ಯದರ್ಶಿಗಳು, ಒಳಾಡಳಿತ ಇಲಾಖೆ)**

12. MPIC ಸಭೆಯಲ್ಲಿ ಪ್ರಧಾನ ಮಂತ್ರಿಗಳ ಹೊಸ 15 ಅಂಶಗಳ ಕಾರ್ಯಕ್ರಮವನ್ನು ಪರಿಶೀಲನೆ ಮಾಡುವಂತೆ ಹಾಗೂ ಎಲ್ಲಾ ಇಲಾಖೆಗಳಲ್ಲಿನ ಫಲಾನುಭವಿ ಆಧಾರಿತ ಯೋಜನೆಗಳಲ್ಲಿ ಶೇ.15 ರಷ್ಟು ಮೀಸಲಾತಿಯು ಅಲ್ಪಸಂಖ್ಯಾತರಿಗೆ ತಲುಪಿರುವ ಬಗ್ಗೆ ಖಚಿತಪಡಿಸಿಕೊಳ್ಳಲು ಸುತ್ತೋಲೆ ಹೊರಡಿಸಲು ಮುಖ್ಯ ಕಾರ್ಯದರ್ಶಿ ರವರು ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ರವರಿಗೆ ಸೂಚಿಸಿದರು.

**(ಕ್ರಮ: ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ)**

13. ಕೋಮು ಸಾಮರಸ್ಯವನ್ನು ಪ್ರಚೋದಿಸುವ ನಿಟ್ಟಿನಲ್ಲಿ ಎಲ್ಲಾ ಶಾಲೆಗಳಲ್ಲಿ ರಾಷ್ಟ್ರೀಯ ಕೋಮು ಸಾಮರಸ್ಯ ವಾರವನ್ನು (Nov 19 to Nov 25 - Communal Harmony Week) ಆಚರಿಸಲು ಸೂಚನೆ ನೀಡುವಂತೆ ಸಮಿತಿಯು ತಿಳಿಸಿತು.

**(ಕ್ರಮ: ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ )**

14. ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮದ ಪ್ರಗತಿಯನ್ನು ಪರಿಶೀಲಿಸಿದ ಮುಖ್ಯ ಕಾರ್ಯದರ್ಶಿ ರವರು ರಾಷ್ಟ್ರೀಯ ಅಲ್ಪಸಂಖ್ಯಾತರ ಅಭಿವೃದ್ಧಿ ಮತ್ತು ಹಣಕಾಸು ನಿಗಮದ (NMDFC) ವತಿಯಿಂದ ಜಾರಿಗೊಳಿಸಲಾಗುತ್ತಿರುವ ನೇರಸಾಲ ಯೋಜನೆಯಡಿಯಲ್ಲಿ ಮತ್ತು ರಾಜ್ಯ ಸರ್ಕಾರದ ಯೋಜನೆಗಳಲ್ಲಿ ಸಮರ್ಪಕ ಪ್ರಗತಿ ಸಾಧನೆಯಾಗದಿರುವುದನ್ನು ಗಮನಿಸಿದ ಮುಖ್ಯ ಕಾರ್ಯದರ್ಶಿ ರವರು ಎಲ್ಲಾ ಯೋಜನೆಗಳ ಪ್ರಗತಿಯನ್ನು ತ್ವರಿತವಾಗಿ ಸಾಧಿಸುವಂತೆ ಹಾಗೂ ಎಲ್ಲಾ ಯೋಜನೆಗಳನ್ನು ಆರ್ಥಿಕ ವರ್ಷದ ಪ್ರಾರಂಭದಲ್ಲಿಯೇ (ಏಪ್ರಿಲ್) ಅನುಷ್ಠಾನಗೊಳಿಸಲು ಕ್ರಮ ವಹಿಸುವಂತೆ ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ ರವರಿಗೆ ಸ್ಪಷ್ಟವಾಗಿ ಸೂಚನೆ ನೀಡಿದರು.

**(ಕ್ರಮ: ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಅಭಿವೃದ್ಧಿ ನಿಗಮ)**

15. ಸರ್ಕಾರಿ ಇಲಾಖೆಗಳಲ್ಲಿ ಅಲ್ಪಸಂಖ್ಯಾತರ ಪ್ರಾತಿನಿಧ್ಯತೆ ಬಗ್ಗೆ ಮುಖ್ಯ ಕಾರ್ಯದರ್ಶಿ ರವರು ಪ್ರಸ್ತಾಪಿಸಿದಾಗ, ಪ್ರತಿಕ್ರಿಯಿಸಿದ ಕಾರ್ಯದರ್ಶಿ, ಕರ್ನಾಟಕ ರಾಜ್ಯ ಅಲ್ಪಸಂಖ್ಯಾತರ ಆಯೋಗ ರವರು ಈ ಕುರಿತು ಎಲ್ಲಾ ಇಲಾಖೆಗಳಿಗೆ ಸಂಪರ್ಕಿಸಲಾಗಿ, ಕೇವಲ ಕೆಲವು ಇಲಾಖೆಗಳನ್ನು ಹೊರತುಪಡಿಸಿ ಬೇರೆ ಇಲಾಖೆಗಳಿಂದ ಮಾಹಿತಿಯನ್ನು ನೀಡಲಾಗಿರುವುದಿಲ್ಲವೆಂದು ತಿಳಿಸಿದರು. ಇದಕ್ಕೆ ಮುಖ್ಯ ಕಾರ್ಯದರ್ಶಿ ರವರು ಇಲಾಖೆಗಳನ್ನು ಪ್ರತ್ಯೇಕವಾಗಿ ಕರೆಯಿಸಿ ಮಾಹಿತಿಯನ್ನು ಪಡೆಯುವಂತೆ ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ರವರಿಗೆ ಸೂಚಿಸಿದರು.

**(ಕ್ರಮ: ಕಾರ್ಯದರ್ಶಿ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ)**

16. ವಸತಿ ಇಲಾಖೆಯ ಪ್ರಗತಿಯನ್ನು ಪರಿಶೀಲಿಸಿದ ಮುಖ್ಯ ಕಾರ್ಯದರ್ಶಿ ರವರು ಅಲ್ಪಸಂಖ್ಯಾತರಿಗೆ ತಲುಪಬೇಕಾದ ಶೇ.15 ರಷ್ಟು ಪ್ರಗತಿಯಾಗದಿರುವುದನ್ನು ಗಮನಿಸಿದರು. ಇದಕ್ಕೆ ಪ್ರತಿಸ್ಪಂದಿಸಿದ ಶ್ರೀ. ಸೈಯದ್ ನಾಸಿರ್ ಹುಸೈನ್, ಮಾನ್ಯ ಸದಸ್ಯರು ವಸತಿ ಇಲಾಖೆಯಲ್ಲಿ

ಫಲಾನುಭವಿಗಳಿಗೆ ಶೇ.15 ರಷ್ಟು ತಲುಪುತ್ತಿರುವ ಬಗ್ಗೆ ಪರಿಶೀಲಿಸಲಾಗುತ್ತಿದೆಯೇ? ಎಂದು ಪ್ರಶ್ನಿಸಿದಾಗ, ಪ್ರತಿಕ್ರಿಯಿಸಿದ ಕಾರ್ಯದರ್ಶಿ, ವಸತಿ ಇಲಾಖೆ ರವರು ಈ ಕುರಿತು ಸಮರ್ಪಕ ಮಾಹಿತಿಯನ್ನು ಒದಗಿಸಲಾಗುವುದೆಂದು ತಿಳಿಸಿದರು.

**(ಕ್ರಮ: ಕಾರ್ಯದರ್ಶಿ, ವಸತಿ ಇಲಾಖೆ)**

17. ಸರ್ಕಾರಿ ಅನುದಾನಿತ ಶಾಲೆಗಳಲ್ಲಿ ಮುಸ್ಲಿಂ ಸಮುದಾಯಕ್ಕೆ ಮೀಸಲಾತಿಯನ್ನು ಒದಗಿಸುವಲ್ಲಿ ನಿಯಮಗಳನ್ನು ಪಾಲಿಸಲಾಗುತ್ತಿಲ್ಲವೆಂದು ಶ್ರೀ. ಸೈಯದ್ ನಾಸಿರ್ ಹುಸೈನ್, ಮಾನ್ಯ ಸದಸ್ಯರು ರವರು ಪ್ರಸ್ತಾಪಿಸಿದರು ಮತ್ತು ಕಳೆದ 5 ವರ್ಷಗಳ ನೇಮಕಾತಿಯ ಮಾಹಿತಿಯನ್ನು ಒದಗಿಸುವಂತೆ ಕೋರಿದರು. ಇದಕ್ಕೆ ಪ್ರತಿಕ್ರಿಯಿಸಿದ ನಿರ್ದೇಶಕರು, ಉರ್ದು ಮತ್ತು ಮತೀಯ ಅಲ್ಪಸಂಖ್ಯಾತರ ಭಾಷಾ ಶಾಲೆಗಳ ನಿರ್ದೇಶನಾಲಯ ಈ ಕುರಿತು ಮಾಹಿತಿಯನ್ನು ಒದಗಿಸಲಾಗುವುದೆಂದು ತಿಳಿಸಿದರು.

**(ಕ್ರಮ: ನಿರ್ದೇಶಕರು, ಉರ್ದು ಮತ್ತು ಮತೀಯ ಅಲ್ಪಸಂಖ್ಯಾತರ ಭಾಷಾ ಶಾಲೆಗಳ ನಿರ್ದೇಶನಾಲಯ)**

**(ಟಿ.ಎಂ.ವಿಜಯ್ ಭಾಸ್ಕರ್)**
ಸರ್ಕಾರದ ಮುಖ್ಯ ಕಾರ್ಯದರ್ಶಿ